# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 370 |
| ಸದಸ್ಯರ ಹೆಸರು | : ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | : ಸಾರಿಗೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 19.08.2026 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಸಿಂಧನೂರು ತಾಲ್ಲೂಕು ರಾಯಚೂರು ಜಿಲ್ಲೆಯಲ್ಲೇ ಸಾರಿಗೆ ಇಲಾಖೆಯ 2ನೇ ಅತೀ ದೊಡ್ಡ ರಾಜಸ್ವ ಸಂಗ್ರಹಣೆ ಪಾಲನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಸಿಂಧನೂರು ತಾಲ್ಲೂಕು ಆರ್.ಟಿ.ಓ ಕಛೇರಿಯನ್ನು ತೆರೆಯಲು ಎಲ್ಲಾ ಮಾನದಂಡಗಳನ್ನು ಪೂರೈಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| (ಇ) | ಎಲ್ಲಾ ಅಗತ್ಯ ಮಾನದಂಡಗಳನ್ನು ಪೂರೈಸಿದ್ದರೂ ಸಿಂಧನೂರು ತಾಲ್ಲೂಕಿನಲ್ಲಿ ಆರ್.ಟಿ.ಓ ಕಛೇರಿಯನ್ನು ತೆರೆಯುವ ಸಂಬಂಧದ ಪ್ರಸ್ತಾವನೆ ಆರ್ಥಿಕ ಇಲಾಖೆಯಿಂದ ತಿರಸ್ಕೃತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನಲ್ಲಿ ಹೊಸದಾಗಿ ಆರ್.ಟಿ.ಓ ಕಛೇರಿ ತೆರೆಯುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಸಹಮತಿಸಿರುವುದಿಲ್ಲ.<br>ಅಲ್ಲದೆ, ಸಾರ್ವಜನಿಕರಿಗೆ ಅವರುಗಳ ವಾಹನ ಅನುಜ್ಞಾ ಪತ್ರ ಮತ್ತು ವಾಹನ ನೋಂದಣಿಯ ಸ್ಮಾರ್ಟ್ ಕಾರ್ಡ್‌ಗಳನ್ನು ಅವರ ಮನೆಯ ವಿಳಾಸಗಳಿಗೆ ಅಂಚೆ ಸೇವೆಯ ಮೂಲಕ ತಲುಪಿಸಲಾಗುತ್ತಿದೆ. ಇಲಾಖೆಯಲ್ಲಿ ವಾಹನ್-4, ಸಾರಥಿ-4 ಮತ್ತು ಇ-ಪೇಮೆಂಟ್ ಆಫ್ ಟ್ಯಾಕ್ಸ್ ನಂತಹ ಆನ್‌ಲೈನ್ ಸೇವೆಗಳನ್ನು ರಾಜ್ಯದ ಎಲ್ಲಾ ಕಛೇರಿಗಳಲ್ಲಿ ಜಾರಿಗೆ ತರಲಾಗಿದೆ ಹಾಗೂ ಸಾರ್ವಜನಿಕರು ಕರ್ನಾಟಕ-1, ಬೆಂಗಳೂರು-1 ಮತ್ತು ಮೊಬೈಲ್-1 ಎಂಬ Appಳಲ್ಲಿ ವಾಹನ ವಿವರ/ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.<br>ಮುಂದುವರೆದು, ಸಿಂಧನೂರು ತಾಲ್ಲೂಕಿನ ಸಾರ್ವಜನಿಕರ ಅನುಕೂಲಕ್ಕಾಗಿ ಪ್ರತಿ ಮಾಹೆಯ ಕೊನೆಯ ಗುರುವಾರದಂದು ಸಾರಿಗೆ ಶಿಬಿರವನ್ನು ನಡೆಸಲಾಗುತ್ತಿದೆ.<br>ಈ ಹಿನ್ನೆಲೆಯಲ್ಲಿ, ಸಿಂಧನೂರು ತಾಲ್ಲೂಕಿನಲ್ಲಿ ಹೊಸ ಪ್ರಾದೇಶಿಕ ಸಾರಿಗೆ ಕಛೇರಿಯನ್ನು ತೆರೆಯುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ. |
| (ಈ) | ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಆರ್.ಟಿ.ಓ ಕಛೇರಿಯನ್ನು ತೆರೆಯುವ ಸಂಬಂಧ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ಕ್ರಮವಹಿಸಲಾಗುವುದು? | |

ಟಿಡಿ 72 ಟಿಡಿಕ್ಯೂ 2026

(ಬಿ.ಎಸ್. ಸುರೇಶ)
ಸಾರಿಗೆ ಸಚಿವರು.